# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ. ಇವರ ವಿರುದ್ಧ ನಡೆಸಲಾದ ಇಲಾಖಾ ವಿಚಾರಣೆ-ದಂಡನೆ ವಿಧಿಸುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/337:/ಗ್ರಾಪಂಕಾ/2016 ದಿನಾಂಕ:22.06.2016
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1/DE/220/2016/ARE-9 Date:27.06.2017.
3. ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1/DE/220/2016/ARE-9 Date:30.06.2017.
4. ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್ ಸಂಖ್ಯೆ: ಗ್ರಾಅಪ/577/ಗ್ರಾಪಂಕಾ/2017 ದಿನಾಂಕ:17.07.2017.
5. ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಇವರು ಸರ್ಕಾರದ ಎರಡನೇ ಕಾರಣ ಕೇಳುವ ನೋಟೀಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 26.05.2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರ ಸರ್ಕಾರದ ಆದೇಶದಲ್ಲಿ ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ. ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ಅಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ನಿಬಂಧಕರು ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

That, DGO while working as Panchayath Development Officer, Kota Grama Panchayath, Lingasugur Taluk, Raichur District, have transferred Rs. 2,865/- to the Krishna Grameena Bank Account NO. 10614100093950 of deceased Garudappa S/o Beerappa who died on 03/02/2014 showing that said Garudappa worked under job card no. 841 while digging Krishi Honda in the land of Sriramappa S/o Durgappa from 25/01/2015 to 08/02/2015 under NREGA Scheme for the year 2014-15 and thereby you have failed to maintain absolute integridy, devotion to duty and acted in a manner unbecoming of a Government servant and thus committed misconduct as enumerated U/R 3(1) of Karnataka Civil Service (Conduct) Rules 1966.

ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ. ಇವರ ವಿರುದ್ಧದ ಆರೋಪವು ಸಾಬೀತಾಗಿದೆಯೆಂದು ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ವಿಚಾರಣಾಧಿಕಾರಿಯವರ ವರದಿಯನ್ನು ಉಪಲೋಕಾಯುಕ್ತರು ಅಂಗೀಕರಿಸಿ ಶ್ರೀ ಸುಶೀಲ್ ಕುಮಾರ್, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿಯಲ್ಲಿ ಕಾರ್ಯನಿರ್ವಹಿಸುವ ವೇಳೆಯಲ್ಲಿ ಇವರು ಶ್ರೀ ಗರುಡಪ್ಪ ಬಿನ್ ಬೀರಪ್ಪ, ದಿನಾಂಕ: 03.02.2014 ರಂದು ನಿಧನ ಹೊಂದಿದ್ದರೂ ಸಹ ಸದರಿಯವರು 2014-15ನೇ ಸಾಲಿನ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿ ಇವರಿಗೆ 25-01-2015 ರಿಂದ 08-02-2015ರ ವರೆಗೆ ಕೃಷಿ ಹೊಂಡ ಅಗೆಯುವ ಕಾರ್ಯ ನಿರ್ವಹಿಸಿರುತ್ತಾರೆಂದು ದಾಖಲಿಸಿ ಇವರ ಹೆಸರಿಗೆ 2,865/- ಗಳನ್ನು ವರ್ಗಾಯಿಸಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಅವರ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಯಿಡಿಯುವ ದಂಡನೆ ವಿಧಿಸುವುದಕ್ಕಾಗಿ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಈ ಸಂಬಂಧ ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಇವರಿಗೆ ನಿಯಮಾನುಸಾರ ಸರ್ಕಾರದ ಪತ್ರದಲ್ಲಿ ವಿಚಾರಣಾಧಿಕಾರಿಯವರ ವರದಿ ಮತ್ತು ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸಿನ ಪ್ರತಿಯೊಂದಿಗೆ ಎರಡನೇ ಕಾರಣ ಕೇಳುವ ನೋಟೀಸ್ಸನ್ನು ಜಾರಿಗೊಳಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರಲ್ಲಿ ಸದರಿ ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸ್ಸಿಗೆ ತಮ್ಮ ಲಿಖಿತ ಹೇಳಿಕೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಸದರಿಯವರ ಲಿಖಿತ ಹೇಳಿಕೆಯನ್ನು ಪರಿಶೀಲಿಸಲಾಗಿದ್ದು, ಸದರಿಯವರು ಅವರ ವಿರುದ್ಧ ಮಾಡಲಾದ ಎಲ್ಲಾ ಆರೋಪಗಳನ್ನು ತಳ್ಳಿಹಾಕಿರುತ್ತಾರೆ ಹಾಗೂ ಅವರ ವಿವರಣೆಯಲ್ಲಿ ಪರಿಗಣಿಸುವಂತಹ ಯಾವುದೇ ಅಂಶಗಳಿರುವುದಿಲ್ಲ ಆದ್ದರಿಂದ ಇದನ್ನು ಒಪ್ಪಲು ಬರುವುದಿಲ್ಲವಾದ ಕಾರಣ ವಿಚಾರಣಾಧಿಕಾರಿಯವರ ವರದಿಯನ್ನು ಪರಿಶೀಲಿಸಲಾಗಿ ವಿಚಾರಣಾಧಿಕಾರಿಯವರು ತಮ್ಮ ನಿರ್ಣಯ ಹಾಗೂ ವರದಿಯನ್ನು ದಾಖಲಿಸಿದ್ದು ಅದರ ಸಂಕ್ಷಿಪ್ತ ಸಾರಾಂಶ ಈ ಕೆಳಕಂಡಂತಿದೆ.

The disciplinary authority has examined the complainant Sri. Mallesha Myageri as P.W.1. He has unequivocally stated, there was a NAREGA scheme for the year 2014-15 implemented in Kota Grama Panchayath. THE DGO admits Rs.2,865/- belonging to Sri. Garadappa.S/o Veerappa was transferred to the a/c 1061400093950 in Pragati Krishna Grameena Bank though he died on 03.02.2014 under the job card NO.841 for doing digging workof "Krishi Handa" in the land of Sri. Sriramappa S/o Durgappa from 25-01-2015 to 08-02-2015 under NAREGA scheme.

Admittedly Sri. Garadappa was died on 03-02-2014 as per the death certificate marked under Ex.D5. But, the muster roll marked under Ex.P4 shows Sl.No.14 details on 12/03/2015 an amount of Rs. 2,865/- is transferred to the A/c NO. 10614100093950 of Pragati Krishna Grameena bank in his name. It is admitted the DGO in the comments filed as per Ex.P6 by that time as per Ex.P4 the date of works was from 25-01-2015 to 08-02-2015 during which period the said Garadappa was not alive. This is clear by the very admissions of the DGO in his comments.

The defense taken by the DGO that he was in charge of 3 panchayaths and it was over loaded with the in charge work and by the oversight he was unable to verify and hence, paid the amount to the deceased is not an acceptable justification.

Based on the evidence lead by the PW.1 and EX0P1 to P6 relied that the evidence of PW.1 is found credit worthy and there is no reason to disbelieve or discard the version of the witness. Accordingly, the disciplinary authority has proved the charges against the DGO.

ಸರ್ಕಾರವು ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದ್ದು, ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಇವರು 2ನೇ ಕಾರಣ ಕೇಳುವ ನೋಟೀಸ್ಸಿಗೆ ನೀಡಿರುವ ಹೇಳಿಕೆ ಸಮರ್ಥನೀಯವಲ್ಲವೆಂದು ಪರಿಗಣಿಸಿರುತ್ತದೆ. ಆದುದರಿಂದ ಸರ್ಕಾರವು ವಿಚಾರಣಾ ವರದಿ ಹಾಗೂ ಸದರಿ ವರದಿಯ ಮೇಲೆ ಮಾನ್ಯ ಉಪಲೋಕಾಯುಕ್ತರ ನಿರ್ಣಯವನ್ನು ಅಂಗೀಕರಿಸಿದೆ ಮತ್ತು ಮಾನ್ಯ ಉಪಲೋಕಾಯುಕ್ತರು ಶಿಫಾರಸ್ಸು ಮಾಡಿರುವಂತೆ ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ. ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಇವರ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಯಿಡಿಯುವ ದಂಡನೆ ವಿಧಿಸಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:577:ಗ್ರಾಪಂಕಾ2017 ಬೆಂಗಳೂರು, ದಿನಾಂಕ:13-03-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು, ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ. ಇವರು ಶ್ರೀ ಗರುಡಪ್ಪ ಬಿನ್ ಬೀರಪ್ಪ, ದಿನಾಂಕ: 03.02.2014 ರಂದು ನಿಧನ ಹೊಂದಿದ್ದರೂ ಸಹ ಸದರಿಯವರು 2014-15ನೇ ಸಾಲಿನ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿ ಇವರಿಗೆ 25-01-2015 ರಿಂದ 08-02-2015ರ ವರೆಗೆ ಕೃಷಿ ಹೊಂಡ ಅಗೆಯುವ ಕಾರ್ಯ ನಿರ್ವಹಿಸಿರುತ್ತಾರೆಂದು ದಾಖಲಿಸಿ ಇವರ ಹೆಸರಿಗೆ 2,865/- ಗಳನ್ನು ವರ್ಗಾಯಿಸಿ ಕರ್ತವ್ಯಲೋಪವೆಸಗಿರುವುದು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮ 1957 ರ ನಿಯಮ 8(iii) ರ ನಿಯಮದಡಿ ನಿರ್ಧಿಷ್ಟಪಡಿಸಿದಂತೆ ಅವರ ಮುಂದಿನ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮವಾಗಿ ತಡೆಯಿಡಿಯುವ ದಂಡನೆ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ರಾಯಚೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ.
6. ಶ್ರೀ ಸುಶೀಲ್ ಕುಮಾರ್ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕೋಟ ಗ್ರಾಮ ಪಂಚಾಯಿತಿ, ಲಿಂಗಸುಗೂರು ತಾಲ್ಲೂಕು, ರಾಯಚೂರು ಜಿಲ್ಲೆ.
7. ಗಣಕ ಕೋಶ.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.